## 1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು

## ಸಿ.ಸಿಃ 154/2015

| | | | |
|---|---|---|---|
| ಸಾಕ್ಷಿದಾರರ ಹೆಸರು | | **ಕೃಷ್ಣೇಗೌಡ** | ಪ್ರಾಸಾಃ 2 |
| ತಂದೆಯ/ಗಂಡನ ಹೆಸರು | | ನಂಜುಂಡೇಗೌಡ | ಚಾಸಾಃ 6 |
| ವಯಸ್ಸು | | 62 ವರ್ಷ | |
| ಕೆಲಸ | | ನಿವೃತ್ತ ಎ.ಎಸ್.ಐ | |
| ವಾಸ | | ಮೈಸೂರು | ದಿಃ 16/06/2025 |

**ಸಾ ಪ್ರ ಬೋ :**

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು ಬದನವಾಳು ಪೋಲಿಸ್ ಠಾಣೆಯಲ್ಲಿ 2011 ರಿಂದ 2015 ರ ವರೆಗೂ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 21.02.2014 ರಂದು 16 ಗಂಟೆಯಲ್ಲಿ ನಾನು ಠಾಣಾ ಪ್ರಭಾರದಲ್ಲಿ ಇರುವಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ನಂ.39/2014 ರಲ್ಲಿ ಭಾ.ದಂ.ಸಂ.ಕಲಂ 341, 323 ಸಹವಾಚಕ ಕಲಂ 34 ರೀತ್ಯಾ ಪ್ರಕರಣವನ್ನು ದಾಖಲಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿನಾಂಕ 22.02.2014 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಂಚರಾದ ಚಾಸಾ-1, 4 ಮತ್ತು 5 ರವರಿಗೆ ಪ್ರಕರಣದ ವಿಚಾರ ತಿಳಿಸಿ ಮಹಜರ್ ಗೆ ಸಹಕರಿಸುವಂತೆ ಕೇಳಿಕೊಂಡ ಮೇರೆಗೆ ಅದಕ್ಕೆ ಅವರು ಒಪ್ಪಿಕೊಂಡ ಮೇರೆಗೆ ಪಂಚರ ಸಮಕ್ಷಮ ಕೃತ್ಯ ಸ್ಥಳದಲ್ಲಿ ಬೆಳಗ್ಗೆ 10 ರಿಂದ 10.45 ರವರೆಗೆ ಮಹಜರ್ ಕ್ರಮವನ್ನು ಜರುಗಿಸಿರುತ್ತೇನೆ. ಅದೇ ದಿನ ಚಾಸಾ 1 ರಿಂದ 3 ರವರ ಹೇಳಿಕೆಗಳನ್ನು ದಾಖಲಿಸಿಕೊಂಡಿರುತ್ತೇನೆ.

ನಂತರ ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ-7 ರವರಿಗೆ ಹಸ್ತಾಂತರಿಸಿರುತ್ತೇನೆ.

ಈಗ ನನಗೆ ತೋರಿಸಿದ ದಾಖಲೆಯು ನಾನು ಸ್ವೀಕರಿಸಿದ ದೂರಾಗಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ.

ಈಗ ನನಗೆ ತೋರಿಸಿದ ದಾಖಲೆಯು ನಾನು ದಾಖಲಿಸಿದ ಪ್ರ.ವ.ವರದಿಯಾಗಿದ್ದು ಅದನ್ನು ನಿಪಿ-3 ಎಂದು, ಸಾಕ್ಷಿಯ ರುಜುವನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ಈಗ ನನಗೆ ತೋರಿಸಿದ ದಾಖಲೆಯು ಸ್ಥಳ ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ. ಎಸ್.ಎಸ್.ಬಿ. ವಕೀಲರಿಂದಃ**

ಮಹಜರ್ ಗೆ ಹಾಜರಾಗುವಂತೆ ಪಂಚರಿಗೆ ನೋಟಿಸನ್ನು ನೀಡಿರುವುದಿಲ್ಲ. ಅವರಿಗೆ ನೋಟಿಸನ್ನು ನೀಡಲು ಯಾವುದೇ ತೊಂದರೆ ಇರಲಿಲ್ಲ. ಕೃತ್ಯ ಸ್ಥಳ ನಮ್ಮ ಪೊಲೀಸ್ ಠಾಣೆಯಿಂದ 26 ಕಿ.ಮಿ ದೂರದಲ್ಲಿರುತ್ತದೆ. ಮಹಜರ್ ದಿನ ಕೃತ್ಯ ಸ್ಥಳಕ್ಕೆ ತಲುಪಲು ನಾವು ಪೋಲಿಸ್ ಠಾಣೆಯನ್ನು 9 ಗಂಟೆಗೆ ಬಿಟ್ಟೆವು. ಸದರಿ ದಿನ ನಾನು ಕೃತ್ಯ ಸ್ಥಳಕ್ಕೆ ಬೇಟಿ ನೀಡಿರುವುದಿಲ್ಲ ಹಾಗೂ ಕೃತ್ಯ ಸ್ಥಳದಲ್ಲಿ ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-2 ನ್ನು ಠಾಣೆಯಲ್ಲಿ ಕುಳಿತು ತಯಾರಿಸಲಾಗಿದೆ ಎಂದರೆ ಸರಿಯಲ್ಲ. ಆರೋಪಿಗಳಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**